# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿನ ಪ್ರಶ್ನೆ ಸಂಖ್ಯೆ : **945**

ಸದಸ್ಯರ ಹೆಸರು : ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : 13-12-2023

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಾರಿಗೆ ಇಲಾಖೆಯಿಂದ ಪರವಾನಗಿ ಪಡೆದು ರಾಜ್ಯದಿಂದ ಅಂತರರಾಜ್ಯಕ್ಕೆ ಹೋಗುವ ಬಸ್‌ಗಳ ಸಂಖ್ಯೆ ಎಷ್ಟು; ಕಳೆದ 5 ವರ್ಷಗಳಿಂದ ಇಲ್ಲಿಯವರೆಗೆ ಅಂತರರಾಜ್ಯಕ್ಕೆ ಪರವಾನಗಿ ಪಡೆದಿರುವ ಬಸ್‌ಗಳ ಮತ್ತು ಅದರ ರಸ್ತೆ ನಕ್ಷೆಯ (ರೂಟ್‌ಮ್ಯಾಪ್) ಸಮೇತ ಸಂಪೂರ್ಣ ಮಾಹಿತಿ ನೀಡುವುದು; | ಸಾರಿಗೆ ಇಲಾಖೆಯಿಂದ ಒಟ್ಟು 1318 ಖಾಸಗಿ ಮಜಲು ವಾಹನ ಪರವಾನಗಿ ಪಡೆದು ರಾಜ್ಯದಿಂದ ಅಂತರ ರಾಜ್ಯಕ್ಕೆ ಸಂಚರಿಸಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಸಾರಿಇ 27 ಸಾಇನ್ಯ 2017, ದಿನಾಂಕ:28-09-2017 ಮತ್ತು ಸಾರಿಇ 174 ಸಾಇಪ 2015, ದಿನಾಂಕ:07-03-2019ರ ಕರ್ನಾಟಕ ರಾಜ್ಯ ಸಮಗ್ರ ಪ್ರದೇಶ ಸಾರಿಗೆ ಯೋಜನೆಯನ್ವಯ ಖಾಸಗಿ ಪ್ರವರ್ತಕರಿಗೆ ಹೊಸ ಮಜಲು ವಾಹನ ರಹದಾರಿಯನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ. ಆದರೆ ಹಾಲಿ ಮಂಜೂರಾಗಿ ಆಚರಣೆಯಲ್ಲಿರುವ ಖಾಸಗಿ ಬಸ್ಸುಗಳ ರಹದಾರಿಗಳನ್ನು ನವೀಕರಿಸಲಾಗುತ್ತಿದೆ.<br><br>ಆದ್ದರಿಂದ, ಸರ್ಕಾರದ ಮೇಲ್ಕಂಡ ಅಧಿಸೂಚನೆಯನ್ವಯ ಅಂತರರಾಜ್ಯಕ್ಕೆ ಖಾಸಗಿ ಬಸ್ಸುಗಳಿಗೆ ಹೊಸ ಪರವಾನಗಿಯನ್ನು ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.<br>**ಕರಾರಸಾ ನಿಗಮ**<br>ಸಾರಿಗೆ ಇಲಾಖೆಯಿಂದ ಪರವಾನಗಿ ಪಡೆದು ಕ.ರಾ.ರ.ಸಾ. ನಿಗಮದ ವ್ಯಾಪ್ತಿಯ ವಿವಿಧ ಘಟಕಗಳಿಂದ ಅಂತರ್ ರಾಜ್ಯಗಳ ವಿವಿಧ ಸ್ಥಳಗಳಿಗೆ 891 ಅನುಸೂಚಿ/ಬಸ್ಸುಗಳನ್ನು ಕಾರ್ಯಾಚರಿಸಲಾಗುತ್ತಿದೆ.<br>ಕಳೆದ 5 ವರ್ಷಗಳಿಂದ ಇಲ್ಲಿಯವರೆಗೆ ಯಾವುದೇ ಅಂತರ ರಾಜ್ಯ ಸಾರಿಗೆ ಒಪ್ಪಂದ ಆಗದಿರುವುದರಿಂದ ಹೊಸದಾಗಿ ನೂತನ ಪರವಾನಗಿಗಳನ್ನು ಪಡೆದಿರುವುದಿಲ್ಲ. |
| ಆ) | ಆಂಧ್ರಪ್ರದೇಶ ಮತ್ತು ತಮಿಳುನಾಡಿನಿಂದ ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಮುಖಾಂತರ ಬೆಂಗಳೂರಿಗೆ ಬರುವ ಖಾಸಗಿ ಬಸ್‌ಗಳೆಷ್ಟು; ಇವುಗಳು ಪರವಾನಗಿ ಪಡೆದು ರಾಜ್ಯಕ್ಕೆ ಸಂಚರಿಸುತ್ತಿದೆಯೇ; ಇಲ್ಲವಾದಲ್ಲಿ, ಪರವಾನಗಿ ಪಡೆಯದೇ ರಾಜ್ಯಕ್ಕೆ ಬರುತ್ತಿರುವ ಖಾಸಗಿ ಬಸ್‌ಗಳ ಮೇಲೆ ಸರ್ಕಾರದಿಂದ ಕಾನೂನು ರೀತಿಯಾಗಿ ಕ್ರಮ ಕೈಗೊಳ್ಳಲಾಗಿದೆಯೇ; ಕ್ರಮ ಕೈಗೊಂಡಲ್ಲಿ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣವಾದ ಮಾಹಿತಿ ನೀಡುವುದು) | ಆಂಧ್ರಪ್ರದೇಶ ಮತ್ತು ತಮಿಳುನಾಡು ರಾಜ್ಯಗಳ ಸಾರಿಗೆ ಪ್ರಾಧಿಕಾರದ ವತಿಯಿಂದ ಅಂತರ ರಾಜ್ಯ ಪರವಾನಗಿಯನ್ನು ಹಾಗೂ ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 88 (8) ಮತ್ತು (9)ರನ್ವಯ ವಿಶೇಷ ರಹದಾರಿಗಳನ್ನು ಪಡೆದು ಸಂಚರಿಸಲು ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಆದುದರಿಂದ, ಖಾಸಗಿ ಬಸ್‌ಗಳ ಸಂಚಾರದ ಮಾಹಿತಿಯು ಲಭ್ಯವಿರುವುದಿಲ್ಲ.<br><br>ಆದಾಗ್ಯೂ, ರಹದಾರಿ ಪಡೆಯದೇ ಅಥವಾ ರಹದಾರಿ ನಿಬಂಧನೆಗಳನ್ನು ಉಲ್ಲಂಘಿಸಿ ಸಂಚರಿಸುವ ವಾಹನಗಳ ಮೇಲೆ ಮೋಟಾರು ವಾಹನಗಳ ಕಾಯ್ದೆ ಮತ್ತು ಅದರಡಿ ರಚಿತವಾದ ನಿಯಮಗಳನ್ವಯ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| ಇ) | ಅಂತರರಾಜ್ಯಕ್ಕೆ ಹೋಗುವ ಖಾಸಗಿ ಬಸ್‌ಗಳು ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯ ಹೆದ್ದಾರಿ ಮುಖಾಂತರ ಹಾದು ಹೋಗಲು ಸರ್ಕಾರದಿಂದ ಯಾವ ರೀತಿಯ ಪರವಾನಗಿ ಪಡೆಯಬೇಕಾಗಿರುತ್ತದೆ; ಗ್ರಾಮೀಣ ಭಾಗದಿಂದ ಅಂತರರಾಜ್ಯಕ್ಕೆ ಸಂಪರ್ಕಿಸುವ ಹಳ್ಳಿಯ ರಸ್ತೆಗಳಲ್ಲಿ ಖಾಸಗಿ ಬಸ್‌ಗಳು ಓಡಾಡುವುದರಿಂದ, ಖಾಸಗಿ ಬಸ್‌ಗಳಿಂದ ಸರ್ಕಾರಕ್ಕೆ ರಸ್ತೆ ತೆರಿಗೆ ನೀಡಲಾಗುತ್ತಿದೆಯೇ; (ಸಂಪೂರ್ಣವಾದ ಮಾಹಿತಿ ನೀಡುವುದು) | ಕರ್ನಾಟಕ ರಾಜ್ಯವು ನೆರೆ ರಾಜ್ಯಗಳೊಂದಿಗೆ ಖಾಸಗಿ/ ಸರ್ಕಾರಿ ಮಜಲು ವಾಹನಗಳ ಸಂಚಾರಕ್ಕೆ ಪರಸ್ಪರ ಒಪ್ಪಂದಗಳನ್ನು ಮಾಡಿಕೊಳ್ಳಲಾಗಿದ್ದು, ಅದರಂತೆ ಅಂತರ ರಾಜ್ಯದ ಪರವಾನಗಿ ಪಡೆದು ಸಂಚರಿಸಲಾಗುತ್ತಿರುವುದರಿಂದ, ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯ ಹೆದ್ದಾರಿ ಮುಖಾಂತರ ಹಾದು ಹೋಗಲು ಸರ್ಕಾರದಿಂದ ಪ್ರತ್ಯೇಕವಾಗಿ ರಹದಾರಿ ಪಡೆಯಬೇಕಾಗಿರುವುದಿಲ್ಲ.<br><br>ಆದಾಗ್ಯೂ, ಖಾಸಗಿ ಬಸ್ಸುಗಳ ಸಂಚಾರಕ್ಕೆ ಮತ್ತು ಪರವಾನಿಗೆಯನ್ನು ಮೋಟಾರು ವಾಹನಗಳ ಕಾಯ್ದೆ 1988ರ, ಕಲಂ 72 ಮತ್ತು 74 ರನ್ವಯ ಹಾಗೂ ಕಲಂ 88 (8) ಮತ್ತು (9)ರಡಿ ವಿಶೇಷ ರಹದಾರಿಗಳನ್ನು ನೀಡಲಾಗುತ್ತಿದೆ.<br><br>ಕರ್ನಾಟಕ ಮೋಟಾರು ವಾಹನಗಳ ಕಾಯ್ದೆ 1957ರ, ಕಲಂ 3(1)ರ ಷೆಡ್ಯೂಲ್ ಪಾರ್ಟ್-ಎ ಐಟಂ ನಂ: 3ರಲ್ಲಿ ನಿಗಧಿಪಡಿಸಿರುವಂತೆ ಖಾಸಗಿ ಮಜಲು ವಾಹನಗಳಿಗೆ ತ್ರೈಮಾಸಿಕ ತೆರಿಗೆ ಆಕರಣೆ ಮಾಡಲಾಗುತ್ತಿದೆ. ರಾಜ್ಯದಲ್ಲಿ ಒಟ್ಟು 21,732 ಮಜಲು ವಾಹನಗಳಿಂದ ಅಂದಾಜು ಪ್ರತಿ ಮಾಹೆ ರೂ. 34.77 ಕೋಟಿ ಮೋಟಾರು ವಾಹನ ತೆರಿಗೆಯನ್ನು ಸಂಗ್ರಹಿಸಲಾಗುತ್ತಿದೆ. |
| ಈ) | ಕೋವಿಡ್ ಸಂಕಷ್ಟ ಕಾಲದಲ್ಲಿ ಜನರ ಓಡಾಟವಿಲ್ಲವಾದ್ದರಿಂದ ಗ್ರಾಮೀಣ ಭಾಗದ ಪ್ರದೇಶಗಳಿಗೆ ಓಡಾಡುತ್ತಿದ್ದ ಸರ್ಕಾರಿ ಬಸ್‌ಗಳನ್ನು ರದ್ದು ಮಾಡಿದ್ದು, ಕೋವಿಡ್ ಕಳೆದು ಸಾಕಷ್ಟು ವರ್ಷಗಳಾಗಿದ್ದು, ಈ ಸೇವೆ ಪುನರಾರಂಭಗೊಳ್ಳದೆ ಇರುವುದರಿಂದ ಗ್ರಾಮೀಣ ಭಾಗದ ಜನರಿಗೆ ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ? (ಸಂಪೂರ್ಣವಾದ ಮಾಹಿತಿ ನೀಡುವುದು) | ಸರ್ಕಾರದ ಗಮನಕ್ಕೆ ಬಂದಿದೆ.<br>**ಕ.ರಾ.ರ.ಸಾ.ನಿಗಮ:-**<br>ನಿಗಮದಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ ಹಾಗೂ 07 ವರ್ಷಗಳಲ್ಲಿ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.<br>ಕೋವಿಡ್ ಪೂರ್ವದಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿದ್ದ 8136 ಅನುಸೂಚಿಗಳ ಪೈಕಿ 2022-23ರ ಅಂತ್ಯಕ್ಕೆ 7426 ಅನುಸೂಚಿಗಳನ್ನು ಮಾಡಲಾಗುತ್ತಿತ್ತು. ಪ್ರಸ್ತುತ 7574 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಕೋವಿಡ್ ಪೂರ್ವಕ್ಕೆ ಹೋಲಿಸಿದಲ್ಲಿ 562 ಕಡಿಮೆ ಅನುಸೂಚಿಗಳನ್ನು ಕಾರ್ಯಾಚರಿಸಲಾಗುತ್ತಿದೆ.<br>ಶಕ್ತಿ ಯೋಜನೆ ಜಾರಿಗೆ ಮೊದಲು 45255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಸದರಿ ಯೋಜನೆ ಜಾರಿಯಾದ ನಂತರದಲ್ಲಿ 46954 ಸರತಿಗಳನ್ನು ಮಾಡಲಾಗುತ್ತಿದೆ. ಪ್ರತಿದಿನ 1699 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ.<br><br>2023-24ನೇ ಸಾಲಿನಲ್ಲಿ 300 ಹೊಸ ಅನುಸೂಚಿಗಳನ್ನು ಕಾರ್ಯಾಚರಿಸಲು ಯೋಜಿಸಲಾಗಿದ್ದು, ಅದರಲ್ಲಿ 137 ಹೊಸ ಅನುಸೂಚಿಗಳನ್ನು ಪ್ರಾರಂಭಿಸಲಾಗಿದೆ.<br><br>ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು / ಜಿ.ಸಿ.ಸಿ ಆಧಾರದ ಮೇಲೆ ಕಾರ್ಯಾಚರಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ:<br>➢ ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಕರ್ನಾಟಕ ಸಾರಿಗೆ ಸಾಮಾನ್ಯ ಮಾದರಿಯ ಒಟ್ಟು 250 ಸಂಖ್ಯೆ ಹೊಸ ವಾಹನಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.6235.44 ಲಕ್ಷಗಳನ್ನು ಬಿಡುಗಡೆ |

ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

- 25 ಹೊಸ ಸಾಮಾನ್ಯ ಕರ್ನಾಟಕ ಸಾರಿಗೆ ಮಾದರಿ ವಾಹನಗಳನ್ನು ಡಿಸೆಂಬರ್-23ರ ಅಂತ್ಯದೊಳಗೆ ಸೇರ್ಪಡೆಗೊಳಿಸಲು ಕ್ರಮ ಜರುಗಿಸಲಾಗಿದೆ.
- 100 ಹೊಸ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಸರಬರಾಜು ಆದೇಶ ನೀಡಿದ್ದು, ಈ ಪೈಕಿ 90 ಬಸ್ಸುಗಳು ಸರಬರಾಜಾಗಿರುತ್ತದೆ.
- 200 ಹೊಸ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಸರಬರಾಜು ಆದೇಶ ನೀಡಲಾಗಿದೆ.
- 40 ಪಲ್ಲಕ್ಕಿ ನಾನ್-ಎ.ಸಿ. ಸ್ಲೀಪರ್ ಬಸ್ಸುಗಳನ್ನು ಖರೀದಿಸಲಾಗಿದೆ.
- 04 ಎ.ಸಿ. ಮತ್ತು 04 ನಾನ್-ಎ.ಸಿ. ಸ್ಲೀಪರ್ ಬಸ್ಸುಗಳನ್ನು ಖರೀದಿಸಲಾಗಿದೆ.
- 300 ಸಂಖ್ಯೆ ವಿದ್ಯುತ್ ಚಾಲಿತ ವಾಹನಗಳನ್ನು ಜಿ.ಸಿ.ಸಿ ಆಧಾರದಲ್ಲಿ ಕಾರ್ಯಾಚರಣೆಗೊಳಿಸಲು ಕ್ರಮ ಜರುಗಿಸಲಾಗುತ್ತಿದ್ದು ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.
- 350 ಸಂಖ್ಯೆ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ.

ಪ್ರಸಕ್ತ ಸಾಲಿನಲ್ಲಿ ಕ.ರಾ.ರ.ಸಾ. ನಿಗಮದಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಪ್ರಸ್ತುತ 2000 ಚಾಲಕ-ಕಂ-ನಿರ್ವಾಹಕ ಹುದ್ದೆ ಹಾಗೂ 300 ತಾಂತ್ರಿಕ ಸಹಾಯಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮ ವಹಿಸಲಾಗುತ್ತಿದೆ. ತಾತ್ಕಾಲಿಕ ಹೊರಗುತ್ತಿಗೆ ಆಧಾರದ ಮೇಲೆ ಚಾಲಕರನ್ನು ನೇಮಿಸಿಕೊಳ್ಳಲಾಗುತ್ತಿದೆ.

**ಬೆಂ.ಮ.ಸಾ.ಸಂಸ್ಥೆ:-**

ಸಂಸ್ಥೆಯಿಂದ ಕಳೆದ 05 ವರ್ಷಗಳಲ್ಲಿ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.

ಕೋವಿಡ್ ಪೂರ್ವದಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿದ್ದ 6185 ಅನುಸೂಚಿಗಳ ಪೈಕಿ 2022-23ರ ಅಂತ್ಯಕ್ಕೆ 5562 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಪ್ರಸ್ತುತ ಸಂಸ್ಥೆಯಿಂದ 5587 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಕೋವಿಡ್ ಪೂರ್ವಕ್ಕೆ ಹೋಲಿಸಿದಲ್ಲಿ 598 ಅನುಸೂಚಿಗಳನ್ನು ಕಡಿಮೆ ಕಾರ್ಯಾಚರಿಸಲಾಗುತ್ತಿದೆ.

ಸಂಸ್ಥೆಯ ಕಾರ್ಯಾಚರಣೆ ವ್ಯಾಪ್ತಿಗೆ ಒಳಪಡುವ ಹಾಗೂ ಬಸ್ಸುಗಳ ಸಂಚಾರಕ್ಕೆ ಸೂಕ್ತ ರಸ್ತೆಗಳಿರುವ ಎಲ್ಲಾ ಪ್ರದೇಶಗಳಿಗೂ ಅವಶ್ಯಕತೆಗನುಗುಣವಾಗಿ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದೆ.

ಸಾರ್ವಜನಿಕ ಪ್ರಯಾಣಿಕರ /ವಿದ್ಯಾರ್ಥಿ ಸಮುದಾಯದ ಬೇಡಿಕೆ ಹಾಗೂ ಒತ್ತಡಕ್ಕನುಗುಣವಾಗಿ, ಮೂಲಭೂತ ಸೌಕರ್ಯಗಳ ಲಭ್ಯತೆಗನುಗುಣವಾಗಿ ಹೊಸ ಮಾರ್ಗಗಳನ್ನು ಪರಿಚಯಿಸುವುದು, ಹಾಲಿಯಿರುವ ಮಾರ್ಗಗಳಲ್ಲಿ ಸಾರಿಗೆಗಳನ್ನು ಹೆಚ್ಚಿಸುವುದು ಮತ್ತು ಪ್ರಯಾಣಿಕರ ಸಂಚಾರ ದಟ್ಟಣೆಗನುಗುಣವಾಗಿ ಸಾರಿಗೆಗಳನ್ನು ಪರಿಷ್ಕರಿಸಿ ಕಾರ್ಯಾಚರಣೆಗೊಳಿಸಲಾಗುತ್ತಿದೆ.

| | | |
|---|---|---|
| | | ಈ ನಿಟ್ಟಿನಲ್ಲಿ ಪ್ರತಿದಿನ ಹವಾನಿಯಂತ್ರಿತ ಸಾರಿಗೆಗಳನ್ನು ಒಳಗೊಂಡಂತೆ 5587 ಅನುಸೂಚಿಗಳನ್ನು 57,652 ಸುತ್ತುವಳಿಗಳೊಂದಿಗೆ ಬೆಂಗಳೂರು ನಗರ ಹಾಗೂ ಹೊರವಲಯದ ಪ್ರಯಾಣಿಕರ ದಟ್ಟಣೆ/ ಅವಶ್ಯಕತೆಗನುಗುಣವಾಗಿ ಕಾರ್ಯಾಚರಣೆ ಮಾಡುತ್ತಿದ್ದು, ಸರಾಸರಿ 40 ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ.<br><br>ಶಕ್ತಿ ಯೋಜನೆ ಜಾರಿಗೆ ಮೊದಲು 56,646 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಸದರಿ ಯೋಜನೆ ಜಾರಿಯಾದ ನಂತರದಲ್ಲಿ 57,652 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಪ್ರತಿದಿನ 1006 ಹೆಚ್ಚುವರಿ ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>2023-24ನೇ ಸಾಲಿನಲ್ಲಿ ಹವಾನಿಯಂತ್ರಿತ ಸಾರಿಗೆಗಳನ್ನು ಒಳಗೊಂಡಂತೆ ಒಟ್ಟು 5923 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಕ್ರಿಯಾ ಯೋಜನೆ ರೂಪಿಸಲಾಗಿದೆ.<br><br>ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು / ಜಿ.ಸಿ.ಸಿ ಆಧಾರದ ಮೇಲೆ ಕಾರ್ಯಾಚರಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:<br><br>➢ 840 ಬಿ.ಎಸ್-6 ಡೀಸೆಲ್ ಬಸ್<br>➢ 921 ಎಲೆಕ್ಟ್ರಿಕ್ ಬಸ್(ಜಿಸಿಸಿ)<br>➢ 100 ಫೀಡರ್ ಸರ್ವಿಸ್ (ಜಿಸಿಸಿ)<br>➢ 20 ಚಿಕ್ಕ ಬಸ್ (ಫೀಡರ್ ಸರ್ವಿಸ್)<br>➢ 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (NCAP)<br>➢ 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (DULT)<br>➢ ಸರ್ಕಾರದಿಂದ ಸಂಸ್ಥೆಗೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನದಲ್ಲಿ 320 ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್‌ಗಳನ್ನು ಕಾರ್ಯಾಚರಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ. 9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>ಸಂಸ್ಥೆಯಲ್ಲಿ 2023-24ನೇ ಸಾಲಿನ ಕಾರ್ಯ ಯೋಜನೆಯನ್ವಯ ಪ್ರಸ್ತುತ 2500 ನಿರ್ವಾಹಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಜಾಹೀರಾತು ಹೊರಡಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ.<br><br>**ವಾ.ಕ.ರ.ಸಾ.ಸಂಸ್ಥೆ:-**<br>ಸಂಸ್ಥೆಯಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ ಹಾಗೂ 07 ವರ್ಷಗಳಿಂದ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.<br>ಕೋವಿಡ್ ಪೂರ್ವದಲ್ಲಿ ಒಟ್ಟು 4679 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, |

ಪ್ರಸ್ತುತ ಅಕ್ಟೋಬರ್-2023ರ ಅಂತ್ಯಕ್ಕೆ ಒಟ್ಟು 4583 ಅನುಸೂಚಿಗಳನ್ನು ಕಾರ್ಯಾಚರಿಸಲಾಗುತ್ತಿದೆ. ಸಂಸ್ಥೆಯ ವ್ಯಾಪ್ತಿಯಲ್ಲಿ ಪ್ರಸ್ತುತ ವಾಹನ/ ಸಿಬ್ಬಂದಿಗಳ ಕೊರತೆಯಿಂದ ಕೋವಿಡ್ ಪೂರ್ವಕ್ಕೆ ಹೋಲಿಸಿದಲ್ಲಿ 88 ಅನುಸೂಚಿಗಳನ್ನು ಕಡಿಮೆ ಕಾರ್ಯಾಚರಿಸಲಾಗುತ್ತಿದೆ. ಆದರೆ, ವಿದ್ಯಾರ್ಥಿ/ ಗ್ರಾಮೀಣ ಭಾಗದ ಪ್ರಯಾಣಿಕರ ಅವಶ್ಯಕತೆಗೆ ಅನುಗುಣವಾಗಿ ಗ್ರಾಮೀಣ ಭಾಗದಲ್ಲಿ 59 ಅನುಸೂಚಿಗಳನ್ನು ಹೆಚ್ಚಿಸಲಾಗಿದೆ.

ಶಕ್ತಿ ಯೋಜನೆಯ ಜಾರಿಯಿಂದಾಗಿ ಜೂನ್-2023ರ ನಂತರ ಪ್ರಯಾಣಿಕರ ಸಂಖ್ಯೆಯು ಗಣನೀಯವಾಗಿ ಹೆಚ್ಚಳವಾಗಿದ್ದು, ಇದರಿಂದ ಗ್ರಾಮೀಣ ಭಾಗದಲ್ಲಿ ಗ್ರಾಮಾಂತರ ಪ್ರದೇಶ ಮತ್ತು ಗ್ರಾಮಾಂತರ ಪ್ರದೇಶದಿಂದ ತಾಲ್ಲೂಕು/ ಜಿಲ್ಲಾ ಕೇಂದ್ರಗಳಲ್ಲಿಯ ಶಾಲಾ/ ಕಾಲೇಜು ವಿದ್ಯಾರ್ಥಿಗಳಿಗೆ ಅನಾನುಕೂಲವಾಗುವುದನ್ನು ತಪ್ಪಿಸಲು ಒಟ್ಟು 124 ಅಂತರ ರಾಜ್ಯ ಸಾರಿಗೆಗಳನ್ನು ಸ್ಥಗಿತಗೊಳಿಸಿ ಸದರಿ ವಾಹನಗಳನ್ನೂ ಸಹ ರಾಜ್ಯದೊಳಗೆ ಕಾರ್ಯಾಚರಣೆಗಾಗಿ ಬಳಸಿಕೊಂಡು ಒಟ್ಟಾರೆಯಾಗಿ 1114 ಸರತಿಗಳನ್ನು ಹೆಚ್ಚಿಸಲಾಗಿದೆ.

ಸಂಸ್ಥೆಯಲ್ಲಿ ಒಟ್ಟು 2000 ಚಾಲಕ-ಕಂ-ನಿರ್ವಾಹಕ ಹುದ್ದೆಗಳ ನೇರ ನೇಮಕಾತಿಯ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ:

- 50 ಗ್ರಾಮಾಂತರ ಸಾರಿಗೆ ವಾಹನಗಳನ್ನು ಖರೀದಿಸಲಾಗಿದೆ.
- ಗ್ರಾಮಾಂತರ ಸಾರಿಗೆಯ 285 ಹೊಸ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- ಸರ್ಕಾರದಿಂದ ಸಂಸ್ಥೆಗೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.150.00 ಕೋಟಿಗಳ ಅನುದಾನ ಸುಮಾರು 375 ಸಂಖ್ಯೆ ಗ್ರಾಮಾಂತರ ಸಾರಿಗೆಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- ಡಲ್ಟ್ ಆರ್ಥಿಕ ಸಹಾಯದಿಂದ 100 ನಗರ ಸಾರಿಗೆ ಬಸ್ಸುಗಳ ಖರೀದಿ ಪ್ರಕ್ರಿಯೆ ಸಹ ಜಾರಿಯಲ್ಲಿರುತ್ತದೆ.
- 20-ನಾನ್ ಎ/ಸಿ ಸ್ಲೀಪರ್ ಹಾಗೂ 04-ಎ/ಸಿ ಸ್ಲೀಪರ್ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

**ಕ.ಕ.ರ.ಸಾ.ನಿಗಮ:-**

ಸಂಸ್ಥೆಯಿಂದ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ ಹಾಗೂ 07 ವರ್ಷಗಳಿಂದ ಸಿಬ್ಬಂದಿ ನೇಮಕಾತಿ ಆಗಿರುವುದಿಲ್ಲ.

ಕೋವಿಡ್ ಪೂರ್ವದಲ್ಲಿ ನಿಗಮದಿಂದ ಒಟ್ಟು 4265 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಪ್ರಸ್ತುತ ನವೆಂಬರ್-2023ರ ಅಂತ್ಯಕ್ಕೆ ಒಟ್ಟು 4395 ಅನುಸೂಚಿಗಳನ್ನು ಕಾರ್ಯಾಚರಿಸಲಾಗುತ್ತಿದೆ.

ಕೋವಿಡ್ ನಂತರ ಕ.ಕ.ರ.ಸಾ.ನಿಗಮದ ಸಾರಿಗೆಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರ ಸಂಖ್ಯೆ

ಕಡಿಮೆಯಾಗಿದ್ದರಿಂದ, ಅವಶ್ಯಕವಿಲ್ಲದ ಸುತ್ತುವಳಿಗಳನ್ನು ಕಡಿತಗೊಳಿಸಲಾಗಿತ್ತು. ನಂತರ ಸಾರ್ವಜನಿಕ ಪ್ರಯಾಣಿಕರ ಓಡಾಟ ಹೆಚ್ಚಾದ ನಂತರ ಬೇಡಿಕೆ/ ಅವಶ್ಯಕತೆಗನುಗುಣವಾಗಿ ಹಂತಹಂತವಾಗಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ.

ಗ್ರಾಮೀಣ ಭಾಗದ ಸಾರ್ವಜನಿಕ ಪ್ರಯಾಣಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳ ಬೇಡಿಕೆ/ ಅವಶ್ಯಕತೆಗೆ ಅನುಗುಣವಾಗಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ

ರಾಜ್ಯಾದ್ಯಂತ ಗ್ರಾಮೀಣ ಭಾಗದಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರ ಸಂಖ್ಯೆ ಪ್ರತಿ ವರ್ಷ ಹೆಚ್ಚಾಗುತ್ತಿದ್ದು, ಅದರಲ್ಲೂ ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸರ್ಕಾರಿ ಬಸ್ಸುಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿರುತ್ತದೆ. ಇದರಿಂದಾಗಿ ಶಾಲಾ ಮಕ್ಕಳಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಕೆಲವು ಸ್ಥಳಗಳಲ್ಲಿ ವರದಿಯಾಗಿದ್ದು ಅಂತಹ ಸ್ಥಳಗಳನ್ನು ಗುರುತಿಸಿ, ಅ ಸ್ಥಳಗಳಿಗೆ ನಿಗಮದ ಸಿಬ್ಬಂದಿಗಳನ್ನು ಮೇಲ್ವಿಚಾರಣೆಗಾಗಿ ನಿಯೋಜಿಸಲಾಗುತ್ತಿದೆ ಹಾಗೂ ಕ.ಕ.ರ.ಸಾ.ನಿಗಮದ ವ್ಯಾಪ್ತಿಯ ಎಲ್ಲಾ ತಾಲ್ಲೂಕುಗಳ ಶಾಲಾ-ಕಾಲೇಜುಗಳ ಮುಖ್ಯೋಪಾಧ್ಯಾಯರು/ ಪ್ರಾಂಶುಪಾಲರು/ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಭೆಯನ್ನು ಏರ್ಪಡಿಸಿ, ಮನವಿಗಳನ್ನು ಪಡೆದುಕೊಂಡು ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮವಹಿಸಲಾಗುತ್ತಿದೆ.

ಶಕ್ತಿಯೋಜನೆ ಜಾರಿಗೂ ಮೊದಲು 22214 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿಯೋಜನೆ ಜಾರಿಯಾದ ನಂತರದಲ್ಲಿ 24744 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ ದಿನ 2530 ಹೆಚ್ಚುವರಿ ಸರತಿಗಳ ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ.

ಪ್ರಸ್ತುತ ನವೆಂಬರ್-2023ರ ಅಂತ್ಯಕ್ಕೆ 4395 ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲಾಗಿರುತ್ತದೆ. ಮಾರ್ಚ್-2023-24ರ ಅಂತ್ಯಕ್ಕೆ 4600 ಅನುಸೂಚಿಗಳ ಕಾರ್ಯಾಚರಣೆಯ ಗುರಿ ಹೊಂದಿದ್ದು, ಹೆಚ್ಚಿನ ಸರತಿಗಳ ಕಾರ್ಯಾಚರಣೆಗೆ ಕ್ರಮ ವಹಿಸಲಾಗುತ್ತಿದೆ

ಶಕ್ತಿ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಬಸ್ಸುಗಳ ಖರೀದಿ ಮತ್ತು ಚಾಲನಾ ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆ ಪ್ರಸ್ತುತ ಜಾರಿಯಲ್ಲಿರುತ್ತದೆ. ಅಲ್ಲಿಯವರೆಗೆ ಹೊರಗುತ್ತಿಗೆ ಆಧಾರದ ಚಾಲಕರ/ ನಿವೃತ್ತ ಚಾಲಕರ ಸೇವೆಯನ್ನು ತಾತ್ಕಾಲಿಕವಾಗಿ ಬಳಸಿಕೊಳ್ಳಲಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ:

- ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಪೂರ್ಣ ಕವಚ ನಿರ್ಮಿತ 250 ವೇಗದೂತ ಸಾರಿಗೆಗಳನ್ನು ಖರೀದಿಸಲು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.6235.44 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ

| | | |
|---|---|---|
| | | ಜಾರಿಯಲ್ಲಿರುತ್ತದೆ.<br>➢ ಪೂರ್ಣ ಕವಚ ನಿರ್ಮಿತ 93 ನಗರ ಸಾರಿಗೆ ಬಸ್ಸುಗಳನ್ನು ಡಲ್ಟ್ ಆರ್ಥಿಕ ಸಹಾಯದಿಂದ ಖರೀದಿಸಲು ಮಂಜೂರಾತಿ ದೊರೆತಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>ಪ್ರಸಕ್ತ ಸಾಲಿನಲ್ಲಿ ನಿಗಮದಲ್ಲಿ 925-ಚಾಲಕ ಹುದ್ದೆ ಮತ್ತು 694-ಚಾಲಕ-ಕಂ-ನಿರ್ವಾಹಕ ಹುದ್ದೆಗಳ ಸೇರಿದಂತೆ 16-ಸಹಾಯಕ ಲೆಕ್ಕಿಗ ಮತ್ತು 300-ನಿರ್ವಾಹಕ ಹುದ್ದೆಗಳನ್ನು ನೇರ ನೇಮಕಾತಿ ಮತ್ತು 59 ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿದ್ದು, ಜನವರಿ 2024ರ ಒಳಗಾಗಿ ನೇಮಕಾತಿ ಪ್ರಕ್ರಿಯೆಗಳನ್ನು ಮುಕ್ತಾಯಗೊಳಿಸಿ, ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಕ್ರಮ ವಹಿಸಲಾಗುವುದು.<br>15-ಸಹಾಯಕ ಲೆಕ್ಕಿಗ ಮತ್ತು 300-ನಿರ್ವಾಹಕ ಹುದ್ದೆಗಳನ್ನು ನೇರ ನೇಮಕಾತಿ ಮತ್ತು 59 ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br>ಮುಂದುವರೆದು, ಬಾಕಿ ಇದ್ದ 36 ಹಿಂಬಾಕಿ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br>ನಾಲ್ಕು ಸಾರಿಗೆ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೋಢೀಕರಿಸಿ ಮಾರ್ಗ ಸಮೀಕ್ಷೆ ಕೈಗೊಂಡು, ವಾಹನಗಳು ಮತ್ತು ಚಾಲನಾ ಸಿಬ್ಬಂದಿಗಳ ಲಭ್ಯತೆಗನುಗುಣವಾಗಿ ಅನುಸೂಚಿಗಳನ್ನು ಹೆಚ್ಚಿಸುವ ಮೂಲಕ ಸಾರಿಗೆ ಸೌಲಭ್ಯವನ್ನು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |

ಟಿಡಿ 73 ಟಿಡಿಕ್ಯೂ 2023

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು.